ಮೌಲ್ಯಾಧಾರಿತ ನೀತಿಯಾಗಿರಬೇಕು. ಹಾಗೆ ಮಾಡದಿದ್ದರೆ ನಿಮ್ಮ ತತ್ವಕ್ಕೆ ವಿರುದ್ಧವಾಗುತ್ತದೆ. ಮೌಲ್ಯಾಧಾರಿತ ರಾಜಕಾರಣಿಗಳಾಗಿ ಜನತೆಗೆ ಒಳ್ಳೆಯ ಕೆಲಸಗಳನ್ನು ಮಾಡಿರಿ ಎಂದು ಹೇಳಿ ಮಾನ್ಯ ಅಧ್ಯಕ್ಷರು ನನಗೆ ಇಷ್ಟು ಮಾತನಾಡಲು ಕಾಲಾವಕಾಶ ಕೊಟ್ಟಿದ್ದಕ್ಕಾಗಿ ಅವರನ್ನು ವಂದಿಸಿ ನನ್ನ ಮಾತನ್ನು ಮುಗಿಸುತ್ತೇನೆ.

ಅಧ್ಯಕ್ಷರು.— ಚರ್ಚೆ ಇಲ್ಲಿಗೆ ಮುಕ್ತಾಯವಾಯಿತು. ನಾಳೆ ಸರ್ಕಾರದಿಂದ ಉತ್ತರ.

ಇವೊತ್ತು ಮಾತನಾಡಿರುವುವರಲ್ಲಿ ಕಾಂಗ್ರೆಸ್‌ನವರು ೩೫೫ ನಿಮಿಷ ಜನತಾ ೨ ನಿಮಿಷ, ಬಿ.ಜೆ.ಪಿ. ೧೦ ನಿಮಿಷ, ಸಿ ಪಿ.ಎಂ. ೧೫ ನಿಮಿಷ. ಸಿ.ಪಿ.ಐ. ೨೩ ನಿಮಿಷ.

ಶಾಸನ ರಚನೆ ಕಲಾಪಗಳು

ಅಧ್ಯಕ್ಷರು.—ಈಗ ಮಾನ್ಯ ಮಂತ್ರಿಗಳು ವಿಧೇಯಕವನ್ನು ಮಂಡಿಸುವುದು.

೧೯೮೭ನೇ ಇಸವಿಯ ಕರ್ನಾಟಕ ಮನರಂಜನೆಗಳ ತೆರಿಗೆ (ಮೂರನೆಯ ತಿದ್ದುಪಡಿ) ವಿಧೇಯಕ

ಮಂಡನೆಗೆ ಅನುಮತಿ ಕೋರಿಕೆ

ಶ್ರೀ ಜಿ. ಬಸವಣ್ಣಪ್ಪ (ಸಮಾಜ ಕಲ್ಯಾಣ ಮಂತ್ರಿಗಳು).—ಮಾನ್ಯ ಅಧ್ಯಕ್ಷರೇ,ಮಾನ್ಯ ಮುಖ್ಯ ಮಂತ್ರಿಗಳು ಇವರ ಪರವಾಗಿ ನಾನು ೧೯೮೭ನೇ ಇಸವಿಯ ಕರ್ನಾಟಕ ಮನರಂಜನೆಗಳ ತೆರಿಗೆ (ಮೂರನೆಯ ತಿದ್ದುಪಡಿ) ವಿಧೇಯಕವನ್ನು ಮಂಡಿಸಲು ತಮ್ಮ ಅನುಮತಿ ಕೋರುತ್ತೇನೆ.

ಅಧ್ಯಕ್ಷರು.—ಪ್ರಸ್ತಾವ ಏನೆಂದರೆ ೧೯೮೭ನೇ ಇಸವಿಯ ಕರ್ನಾಟಕ ಮನರಂಜನೆಗಳ ತೆರಿಗೆ (ಮೂರನೆಯ ತಿದ್ದುಪಡಿ) ವಿಧೇಯಕವನ್ನು ಮಂಡಿಸಲು ಅನುಮತಿ ನೀಡುವುದು.

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಅನುಮತಿ ನೀಡಲಾಯಿತು.

ಶ್ರೀ ಜಿ. ಬಸವಣ್ಣಪ್ಪ (ಸಮಾಜ ಕಲ್ಯಾಣ ಮಂತ್ರಿಗಳು) ಮಾನ್ಯ ಅಧ್ಯಕ್ಷರೇ, ಮಾನ್ಯ ಮುಖ್ಯ ಮಂತ್ರಿಗಳ ಪರವಾಗಿ ನಾನು ೧೯೮೭ನೇ ಇಸವಿಯ ಕರ್ನಾಟಕ ಮನರಂಜನೆಗಳ ತೆರಿಗೆ (ಮೂರನೆಯ ತಿದ್ದುಪಡಿ) ವಿಧೇಯಕವನ್ನು ಈ ಸಭೆಯ ಮುಂದೆ ಮಂಡಿಸುತ್ತೇನೆ.

ಅಧ್ಯಕ್ಷರು.—ವಿಧೇಯಕವನ್ನು ಮಂಡಿಸಲಾಗಿದೆ.

ಪ್ರಕಟಣೆ

ಕುಟುಂಬ ಕಲ್ಯಾಣ ಕಾರ್ಯಕ್ರಮದ ಪ್ರಯುಕ್ತ ನಾಳೆ ಅಂದರೆ ದಿನಾಂಕ ೩-೪-೧೯೮೭ರ ಶುಕ್ರವಾರ ಬೆಳಿಗ್ಗೆ ಬ್ಯಾಂಕ್ವೆಟ್ ಹಾಲ್‌ನಲ್ಲಿ ಕರ್ನಾಟಕ ರಾಜ್ಯ ಶಾಸಕರ ಸಮ್ಮೇಳನ ನಡೆಯಲಿದೆ. ದಯವಿಟ್ಟು ಮಾನ್ಯ ಸದಸ್ಯರೆಲ್ಲರೂ ಭಾಗವಹಿಸಬೇಕು.

ಎರಡನೆಯದಾಗಿ ಈ ದಿನ ಅಂದರೆ ದಿನಾಂಕ ೨-೪-೧೯೮೭ರಂದು ಗುರುವಾರ ೬ ಗಂಟೆಗೆ ಕಾಮನ್‌ವೆಲ್ತ್ ಅಸೋಸಿಯೇಷನ್‌ನ ಜನರಲ್ ಬಾಡಿ ವಿೂಟಿಂಗ್ ಇದೆ. ದಯವಿಟ್ಟು ಮಾನ್ಯ ಸದಸ್ಯರು ಭಾಗವಹಿಸಬೇಕು.

ಶ್ರೀ ಎಂ. ಮಲ್ಲಿಕಾರ್ಜುನ ಖರ್ಗೆ.—ಮಾನ್ಯ ಅಧ್ಯಕ್ಷರೆ, ವೆಂಕಟಸ್ವಾಮಿ ಆಯೋಗದ ರಿಪೋರ್ಟಿನ ಬಗ್ಗೆ ಅನೇಕ ಮಾನ್ಯ ಸದಸ್ಯರು ಮಾತನಾಡಬೇಕೆಂದಿದ್ದಾರೆ. ಇದಕ್ಕೆ ೨-೩ ಗಂಟೆ ಕಾಲವಾದರೂ ಮಾತನಾಡಲಿಕ್ಕೆ ಒಂದು ನಿಗದಿ ಮಾಡಬೇಕೆಂದು ಕೇಳುತ್ತೇನೆ.

ಅಧ್ಯಕ್ಷರು.—ಮತ್ತೆ ಜುಲೈ ತಿಂಗಳಲ್ಲಿ ಅಧಿವೇಶನ ಕರೆದಾಗ ಮಾತನಾಡಬಹುದು.